

ಅರುಣ ಪಿ. ಭಟ್ಟ

## ವಾರಭವಿಷ್ಯ: 20.06.2024ರಿಂದ 26.06.2024ರವರೆಗೆ




ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಸಾಧ್ಯತೆ ಇದೆ. ಉದ್ಯೋಗ ಹಾಗೂ ವೃತ್ತಿಗೆ ಸಂಬಂಧಿಸಿದಂತೆ ವಾರದ ಶುರುವಿನಿಂದಲೂ ಕೆಲವು ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ. ಇತರ ಸ್ಥಳದಲ್ಲಿ ನಡೆಯುತ್ತಿರುವ ಕೆಲಸಗಳನ್ನು ನಿರ್ವಹಿಸಲು ನಿಮ್ಮನ್ನು ನಿಯೋಜನೆ ಮಾಡಬಹುದು. ಇದನ್ನು ಅವಕಾಶವಾಗಿ ಬಳಸಿಕೊಳ್ಳುವುದರಲ್ಲಿ ಬಿಡುವಿಲ್ಲದಂತೆ ಆಗುತ್ತದೆ. ಶುಭದಿನ 22. ಗಣಪತಿಗೆ ದೂರ್ವಾರ್ಚನೆ ಮಾಡಿಸಿರಿ.




ಕುಟುಂಬದ ಬಗ್ಗೆ ಹೆಮ್ಮೆ ಪಡುವಂಥ ಬೆಳವಣಿಗೆ ಆಗುತ್ತದೆ. ವಾರದ ಶುರುವಿನಿಂದಲೇ ಉತ್ಸಾಹದಿಂದ ಕಾಣಿಸಿಕೊಳ್ಳುತ್ತೀರಿ. ನಿಮ್ಮ ವೈಯಕ್ತಿಕ ಶ್ರಮದಿಂದ ಹೆಚ್ಚಿನ ಯಶಸ್ಸು ಪಡೆಯಲು ಸಾಧ್ಯವಾಗುತ್ತದೆ. ಆ ಕಾರಣಕ್ಕಾಗಿ ಹಲವು ಕೆಲಸ ಕಾರ್ಯಗಳನ್ನು ಪೂರೈಸಲಾಗುತ್ತದೆ. ಇದರಿಂದ ನಿಮಗೆ ಸಂತುಷ್ಟವಾಗುತ್ತದೆ. ಭಿನ್ನಾಭಿಪ್ರಾಯ ಮರೆಯಲು ಪ್ರಯತ್ನ ಮಾಡುತ್ತೀರಿ. ಶುಭದಿನ 24. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಹಣಕಾಸಿನ ಸಂಸ್ಥೆಗಳ ಜೊತೆಗೆ ಒಪ್ಪಂದ ಮಾಡಿಕೊಳ್ಳುವ ಸಾಧ್ಯತೆ. ವ್ಯಾಪಾರವನ್ನು ಬಲಪಡಿಸುವ ಸಲುವಾಗಿ ಹೆಚ್ಚು ಶ್ರಮ ಹಾಕಲಿದ್ದೀರಿ. ಹಣವನ್ನು ಹೊಂದಿಸುವ ಸಲುವಾಗಿ ಹಣಕಾಸು ಸಂಸ್ಥೆಗಳಿಂದ ಬಂಡವಾಳ ತರಲಿದ್ದೀರಿ. ಈ ಪ್ರಯತ್ನದಲ್ಲಿ ನಿಮಗೆ ಯಶಸ್ಸು ದೊರೆಯುವ ಸಾಧ್ಯತೆ ಇದೆ. ವೈವಾಹಿಕ ಜೀವನವು ಸಂತೋಷವಾಗಿರುತ್ತದೆ. ಶುಭದಿನ 22. ಚಾಮುಂಡಿ ಸ್ತುತಿ ವನದುರ್ಗಾ ಆರಾಧನೆ ಮಾಡಿರಿ.




ಮಕ್ಕಳ ಪ್ರಗತಿಯಿಂದ ಮನಸಿಗೆ ಸಂತಸವಾಗುತ್ತದೆ. ಆದಾಯ ಮೂಲಗಳು ಹೆಚ್ಚಿಸಿಕೊಳ್ಳುವುದರಲ್ಲಿ ಸಫಲರಾಗಲಿದ್ದು, ಅದರಿಂದ ಅನುಕೂಲ ದೊರೆಯಲು ಆರಂಭವಾಗುತ್ತದೆ. ಪ್ರೀತಿ– ಪ್ರೇಮ ಸಂಬಂಧದಲ್ಲಿ ತೊಡಗಿರುವವರು ಸುಮಧುರವಾದ ಅನುಭವವನ್ನು ಪಡೆಯಲಿದ್ದೀರಿ. ನಿಮ್ಮ ಉತ್ಸಾಹದಾಯಕ ಸ್ವಭಾವವು ಸಂತಸವಾದ ವಾತಾವರಣವನ್ನು ಸೃಷ್ಟಿ ಮಾಡುತ್ತದೆ. ಶುಭದಿನ 25. ಹನುಮಾನ್ ಚಾಲಿಸ್ ಪಠಿಸಿರಿ.




ವಾರದ ಶುರುವಿನಿಂದಲೇ ಅಂದುಕೊಂಡ ಯೋಜನೆಗಳನ್ನು ಪೂರ್ಣಗೊಳಿಸಲು ಸಾಧ್ಯವಾಗುತ್ತದೆ. ಆ ಮೂಲಕ ಅವರ ಮೆಚ್ಚುಗೆಯನ್ನು ಪಡೆಯುತ್ತೀರಿ. ಪರಿಣಾಮಕಾರಿಯಾದ ಕಾರ್ಯವೈಖರಿಯನ್ನು ಮೆಚ್ಚಿಕೊಳ್ಳುತ್ತಾರೆ. ಮುಂಚಿತವಾಗಿ ಕೆಲಸಗಳನ್ನು ಪೂರೈಸಲು ಸಾಧ್ಯವಾಗುತ್ತದೆ. ಮನೆಯಲ್ಲಿ ಹಾಗೂ ಕುಟುಂಬದಲ್ಲಿ ಸಂತಸ ಇರುತ್ತದೆ. ಶುಭದಿನ 23. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ಪುಣ್ಯಕ್ಷೇತ್ರ ದರ್ಶನಕ್ಕೆ ತೆರಳುವ ಸಾಧ್ಯತೆ. ಅಗತ್ಯಕ್ಕೆ ತಕ್ಕಂತೆ ಈ ವಾರ ಕೆಲ ನಿಯಮಗಳನ್ನು ಅಳವಡಿಸಿಕೊಳ್ಳಲಿದ್ದೀರಿ. ಕೆಲವು ಕೆಲಸಗಳನ್ನು ಪೂರ್ಣಗೊಳಿಸುವ ನಿಟ್ಟಿನಲ್ಲಿ ನಿಮ್ಮ ಸೋದರ ಸೋದರಿಯರು ನಿಮ್ಮ ಸಹಾಯಕ್ಕೆ ನಿಲ್ಲುತ್ತಾರೆ. ಅದಕ್ಕಾಗಿ ಅವರಿಗೆ ಗೌರವ ಹಾಗೂ ಅಧಿಕಾರ ನೀಡುತ್ತೀರಿ. ಮನೆಯಲ್ಲಿ ಸಂತಸದ ವಾತಾವರಣ ಇರುತ್ತದೆ. ಶುಭದಿನ 26. ಆದಿತ್ಯ ಹೃದಯ ಪಠಿಸಿರಿ.




ಕುಟುಂಬ ಸದಸ್ಯರ ಜೊತೆಗೆ ಹೆಚ್ಚಿನ ಸಮಯ ಕಳೆಯುವ ಸಾಧ್ಯತೆ ಇದೆ. ಹಿಂದೆಂದಿಗಿಂತಲೂ ಈ ವಾರ ಹೆಚ್ಚು ಚಟುವಟಿಕೆಯಿಂದ ನೀವು ಇರಬೇಕಾಗುತ್ತದೆ. ಭೂ ವ್ಯಾಜ್ಯವೊಂದಕ್ಕೆ ಶ್ರಮ ಹಾಕಲಿದ್ದೀರಿ. ನೀವು ಪ್ರತಿನಿಧಿಸುವ ಸಂಸ್ಥೆಯ ಸಾಮರ್ಥ್ಯವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಕೆಲವು ಸೂತ್ರಗಳನ್ನು ರೂಪಿಸಲಿದ್ದೀರಿ. ಆರೋಗ್ಯದ ಮೇಲೆ ಪ್ರತಿಕೂಲ ಪರಿಣಾಮ ಬೀರಲಿದೆ. ಶುಭದಿನ 26. ಚಂಡಿ ಪಾರಾಯಣ ಮಾಡಿರಿ.




ವಾರದ ಆರಂಭದಿಂದಲೇ ನಿಮ್ಮ ಕೆಲಸಗಳಿಗೆ ವೇಗ ನೀಡುತ್ತೀರಿ. ನಿಮ್ಮ ಕಾರ್ಯ ಯೋಜನೆಗಳನ್ನು ಅಂತಿಮಗೊಳಿಸಲು ಅಧಿಕಾರಿಗಳ ನೆರವು ದೊರೆಯುತ್ತದೆ. ನಿಮ್ಮ ಕೆಲಸ ಇನ್ನಷ್ಟು ಪರಿಣಾಮಕಾರಿಯಾಗಿ ಮಾಡಲು ಸಾಧ್ಯವಾಗುತ್ತದೆ. ಸಿಬ್ಬಂದಿ ನೇಮಕದಲ್ಲಿ ಕೆಲವು ಸವಾಲುಗಳನ್ನು ಎದುರಿಸಬೇಕಾಗುತ್ತದೆ. ವೈವಾಹಿಕ ಜೀವನವು ಸಂತಸದಾಯಕವಾಗಿರುತ್ತದೆ. ಶುಭದಿನ 22. ಶ್ರೀ ಲಕ್ಷ್ಮೀನರಸಿಂಹ ಪಂಚರತ್ನ ಓದಿರಿ.




ನಿಮ್ಮ ಕೆಲಸ– ಕಾರ್ಯಗಳನ್ನು ಪೂರ್ಣಗೊಳಿಸಲು ಅಗತ್ಯ ಇರುವ ಸಲಕರಣೆಗಳನ್ನು ಸ್ಥಳೀಯ ಮಾರುಕಟ್ಟೆಯಿಂದ ಖರೀದಿ ಮಾಡುವ ಸಾಧ್ಯತೆ ಇದೆ. ಬೇರೊಬ್ಬರ ಮೇಲಿನ ಅವಲಂಬನೆ ಕಡಿಮೆ ಆಗುತ್ತದೆ. ಹಣ ಹೂಡಿಕೆ ವ್ಯವಹಾರದಲ್ಲಿ ಅನುಕೂಲ ಆಗಲಿದೆ. ಈ ಅವಧಿಯಲ್ಲಿ ದೈಹಿಕ ಸಮಸ್ಯೆಗಳು ಕಾಡಬಹುದು. ವೈಯಕ್ತಿಕ ಸಂಬಂಧದಲ್ಲಿ ತೊಂದರೆ ಆಗುತ್ತದೆ. ಶುಭದಿನ 23. ವಿಷ್ಣು ಸಹಸ್ರನಾಮ ಪಠಿಸಿರಿ.




ಆದಾಯದಲ್ಲಿ ಹೆಚ್ಚಳ ಆಗುತ್ತಾ ಹೋಗುತ್ತದೆ. ಜೀವನಮಟ್ಟ ಉತ್ತಮಗೊಳ್ಳಲಿದೆ. ಈ ವಾರ ಕೆಲವು ಉಪಯುಕ್ತ ಸಂಪನ್ಮೂಲಗಳನ್ನು ಕ್ರೋಢೀಕರಿಸಲು ಸಾಧ್ಯವಾಗುತ್ತದೆ. ವಿವಿಧ ಆದಾಯ ಮೂಲಗಳಿಂದ ಅನುಕೂಲ ಒದಗಿ ಬರಲಿದೆ. ಇದರಿಂದ ನಿಮಗೆ ಸಂತೋಷವಾಗುತ್ತದೆ. ನಿಮ್ಮ ಸಂಗಾತಿಯ ಭಾವನೆಗಳನ್ನು ಅರ್ಥ ಮಾಡಿಕೊಳ್ಳುವಲ್ಲಿ ಯಶಸ್ವಿ ಆಗುತ್ತೀರಿ. ಶುಭದಿನ 22. ಶಿವಕವಚ ಪಠಣ ಮಾಡಿರಿ.




ವೃತ್ತಿಪರ ಬದುಕಿನಲ್ಲಿ ಹಲವು ಅವಕಾಶಗಳು ನಿಮಗೆ ದೊರೆಯಲಿವೆ. ಚಿಂತೆಗೆ ಈಡು ಮಾಡಿದ್ದ ವಾತಾವರಣವು ಕರಗಲಿದೆ. ಆಹಾರ ಪಥ್ಯವನ್ನು ಅನುಸರಿಸಲಿದ್ದೀರಿ. ಉದ್ಯೋಗದಲ್ಲಿ ಬಡ್ತಿ ಸಿಗುವ ಸಾಧ್ಯತೆ ಇದೆ. ಆ ಮೂಲಕ ಪೂರ್ಣ ಸಾಮರ್ಥ್ಯದಿಂದ ಕಾರ್ಯ ಮಾಡಲು ಸಾಧ್ಯವಾಗುತ್ತದೆ. ವೈಯಕ್ತಿಕ ಬದುಕು ಸಂತಸದಾಯಕವಾಗಿ ಇರುತ್ತದೆ. ಶುಭದಿನ 25. ರಾಘವೇಂದ್ರ ಸ್ವಾಮಿ ಭಜನೆ ಮಾಡಿರಿ.




ಈ ಹಿಂದೆ ಪೂರ್ಣಗೊಳಿಸಲು ಸಾಧ್ಯವಾಗದಂಥ ಹಲವು ಕೆಲಸ– ಕಾರ್ಯಗಳನ್ನು ಪೂರ್ಣಗೊಳಿಸಲು ಆಗುತ್ತದೆ. ವಾರದ ಮೊದಲ ಭಾಗವು ಆರೋಗ್ಯದ ಮೇಲೆ ಅಡ್ಡ ಪರಿಣಾಮ ಬೀರುತ್ತದೆ. ಇದರಿಂದ ನಿಮಗೆ ಚಿಂತೆ ಉಂಟಾಗುತ್ತದೆ. ನಿಮ್ಮ ಸಾಮರ್ಥ್ಯ ಹೆಚ್ಚಾಗುತ್ತಾ ಸಾಗುತ್ತದೆ. ನಿಮ್ಮ ಜವಾಬ್ದಾರಿಗಳನ್ನು ಪೂರೈಸಲು ಹೆಚ್ಚು ಸಮಯವನ್ನು ಮೀಸಲಿಡುತ್ತೀರಿ. ಶುಭದಿನ 24. ಕಾರ್ತಿಕೇಯ ಸ್ತೋತ್ರ ಪಠಣ ಮಾಡಿರಿ.